## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಇವರು ನಿಯಮ 330ರಡಿ ನೀಡಿರುವ ಸೂಚನೆಗೆ ಉತ್ತರ

**ಸೂಚನೆ:**

ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಪ್ರವಾಸೋದ್ಯಮವನ್ನು ಪ್ರಾರಂಭಿಸಲು / ಪ್ರವಾಸೋದ್ಯಮಕ್ಕೆ ಇರುವ ಅವಕಾಶಗಳ ಕುರಿತು.

**ಉತ್ತರ:**

ಪ್ರವಾಸೋದ್ಯಮ ನೀತಿ 2020-26ರಡಿ ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಯಲ್ಲಿ ಈ ಕೆಳಕಂಡ ಸ್ಥಳಗಳನ್ನು ಪ್ರವಾಸಿ ತಾಣಗಳಾಗಿ ಗುರುತಿಸಲಾಗಿದೆ.

| ಕ್ರಮ ಸಂಖ್ಯೆ | ಜಿಲ್ಲೆ | ತಾಲ್ಲೂಕು | 2020-26 ಪ್ರವಾಸೋದ್ಯಮ ನೀತಿಯಡಿ ಗುರುತಿಸಿರುವ ಪ್ರವಾಸಿ ತಾಣಗಳು | ತಾಣಗಳ ಸಂಖ್ಯೆ |
|---|---|---|---|---|
| 1. | ಬಾಗಲಕೋಟೆ | ಬಾಗಲಕೋಟೆ | ಮುಚಕಂಡಿಕೆರೆ, ಸಿಮಿಕೇರಿ-ಲಡ್ಡುಮುತ್ಯಾ | 2 |
| | | ಹುನಗುಂದ | ಐಹೊಳೆ, ಕೂಡಲಸಂಗಮ | 2 |
| | | ಬಾದಾಮಿ | ಬಾದಾಮಿ, ಪಟ್ಟದಕಲ್ಲು, ಮಹಾಕೂಟ | 3 |
| | | ಬೀಳಗಿ | ಚಿಕ್ಕಸಂಗಮ | 1 |
| | | ಜಮಖಂಡಿ | ಕಟ್ಟಿಕೆರೆ | 1 |
| 2. | ವಿಜಯಪುರ | ವಿಜಯಪುರ | ಗೋಲಗುಂಬಜ ಮತ್ತು ಇಬ್ರಾಹಿಂ ರೋಜಾ, ತೊರವಿ, ಕನಮಡಿ, ಜಾಲಗೇರಿ ಮುಮ್ಮಟ್ಟಿ ಗುಡ್ಡ, ದ್ಯಾಬೇರಿ, ಕುಮಟಗಿ, ಉಪ್ಪಲದಿನ್ನಿ, ಹರಳಯ್ಯನ ಗುಂಡ, ಶೇಗುಣಶಿ, ತಿಕೋಟ. | 11 |
| | | ಬಸವನ ಬಾಗೇವಾಡಿ | ಬಸವನ ಬಾಗೇವಾಡಿ, ಆಲಮಟ್ಟಿ ಆಣೆಕಟ್ಟು ಇಂಗಳೇಶ್ವರ | 3 |
| | | ಮುದ್ದೇಬಿಹಾಳ | ಯಲಗೂರು, ತಂಗಡಗಿ, ಕೋಳೂರು. | 3 |
| | | ಇಂಡಿ | ಹೊರ್ತಿ, ಹೀರೆರೂಗಿ, ಸಾಲೋಟಗಿ, ಹಲಸಂಗಿ. | 4 |
| | | ಸಿಂದಗಿ | ಯಂಕಂಚಿ, ದೇವರಹಿಪ್ಪರಗಿ, ಚಟ್ಟರಕಿ, ಕಡ್ಲೆವಾಡ. | 4 |

ಪ್ರವಾಸೋದ್ಯಮ ನೀತಿ 2020-26ರಡಿ ಪ್ರವಾಸೋದ್ಯಮಕ್ಕೆ ಅವಕಾಶ ಕಲ್ಪಿಸಲು ಬಾಗಲಕೋಟೆ ಜಿಲ್ಲೆಯ ಐಹೊಳೆ, ಬಾದಾಮಿ, ಪಟ್ಟದಕಲ್ಲು, ಬೀಳಗಿ, ಕೂಡಲ ಸಂಗಮಗಳನ್ನು ಹಾಗೂ ವಿಜಯಪುರ ಜಿಲ್ಲೆಯನ್ನು ಆದ್ಯತಾ ಪ್ರವಾಸಿ ತಾಣವಾಗಿ ಗುರುತಿಸಲಾಗಿದೆ.

ಪ್ರವಾಸೋದ್ಯಮ ಅಭಿವೃದ್ಧಿ ದೃಷ್ಟಿಯಿಂದ ಸದರಿ ಆದ್ಯತಾ ಪ್ರವಾಸಿ ತಾಣಗಳಲ್ಲಿ ಬಂಡವಾಳ ಹೂಡಲು ಮುಂದೆ ಬರುವ ಖಾಸಗಿ ಹೂಡಿಕೆದಾರರಿಗೆ ಸಹಾಯಧನ, ರಿಯಾಯಿತಿ ಮತ್ತು ಉತ್ತೇಜನಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ ಹಾಗೂ ಸದರಿ ಸ್ಥಳಗಳಲ್ಲಿ ಯಾತ್ರಿನಿವಾಸ/ಡಾರ್ಮಿಟರಿ ಹಾಗೂ ಇತರೆ ಪ್ರವಾಸಿ ಮೂಲಸೌಲಭ್ಯಗಳನ್ನು ಆದ್ಯತೆ ಮೇರೆಗೆ ಕಲ್ಪಿಸಲಾಗುತ್ತಿದೆ.

ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಬಾಗಲಕೋಟೆ ಜಿಲ್ಲೆಯ ಬಾದಾಮಿಯಲ್ಲಿ 72 ಕೊಠಡಿಗಳ ತ್ರಿ-ಸ್ಟಾರ್ ಹೋಟೆಲ್ ನಿರ್ಮಾಣ ಕಾಮಗಾರಿಯನ್ನು ರೂ.1767.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಅನುಮೋದನೆ ನೀಡಲಾಗಿದೆ. ಸದರಿ ಕಾಮಗಾರಿಗೆ ರೂ.589.00 ಲಕ್ಷಗಳ ಅನುದಾನವನ್ನು ಅನುಷ್ಠಾನ ಸಂಸ್ಥೆಗೆ ಬಿಡುಗಡೆ ಮಾಡಲಾಗಿದೆ. ಕಾಮಗಾರಿ ಪ್ರಗತಿಯಲ್ಲಿದೆ.

ಬಾಗಲಕೋಟೆ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಸಂಬಂಧ ಬಂಡವಾಳ ವೆಚ್ಚಗಳು ಹಾಗೂ ಕೆ.ಟಿ.ವಿ.ಜಿ ಲೆಕ್ಕಶೀರ್ಷಿಕೆ ಅಡಿ ಕಳೆದ 5 ವರ್ಷಗಳಲ್ಲಿ ಇಲಾಖೆಯಿಂದ ರೂ.8600.75 ಲಕ್ಷಗಳ ಅಂದಾಜು ವೆಚ್ಚದಲ್ಲಿ 16 ಕಾಮಗಾರಿಗಳನ್ನು ಕೈಗೊಂಡಿದ್ದು, ರೂ.3962.75 ಲಕ್ಷಗಳ ಅನುದಾನವನ್ನು ಸಂಬಂಧಪಟ್ಟ ಅನುಷ್ಠಾನ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗಿದೆ.

ವಿಜಯಪುರ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಸಂಬಂಧ ಬಂಡವಾಳ ವೆಚ್ಚಗಳು ಹಾಗೂ ಕೆ.ಟಿ.ವಿ.ಜಿ. ಲೆಕ್ಕಶೀರ್ಷಿಕೆ ಅಡಿ ಕಳೆದ 5 ವರ್ಷಗಳಲ್ಲಿ ಇಲಾಖೆಯಿಂದ ರೂ.5210.00 ಲಕ್ಷಗಳ ಅಂದಾಜು ವೆಚ್ಚದಲ್ಲಿ 19 ಕಾಮಗಾರಿಗಳನ್ನು ಕೈಗೊಂಡಿದ್ದು, ರೂ.2048.00 ಲಕ್ಷಗಳ ಅನುದಾನವನ್ನು ಸಂಬಂಧಪಟ್ಟ ಅನುಷ್ಠಾನ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗಿದೆ.

ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ವಿಜಯಪುರ ಜಿಲ್ಲೆಯ ಭೂತನಾಳ ಕೆರೆಯ ಪ್ರದೇಶದಲ್ಲಿ ರೂ.16.36 ಕೋಟಿಗಳ ಅಂದಾಜು ವೆಚ್ಚದಲ್ಲಿ 59 ಕೊಠಡಿಗಳ ತ್ರಿಸ್ಟಾರ್ ಹೋಟೆಲ್ ಕಾಮಗಾರಿಗೆ ಅನುಮೋದನೆ ನೀಡಿಲಾಗಿದೆ. ರೂ.545.00 ಲಕ್ಷಗಳ ಅನುದಾನವನ್ನು ಅನುಷ್ಠಾನ ಸಂಸ್ಥೆಗೆ ಬಿಡುಗಡೆ ಮಾಡಲಾಗಿದೆ. ಕಾಮಗಾರಿ ಅಂತಿಮ ಹಂತದಲ್ಲಿದೆ.

**ಸಂಖ್ಯೆ. ಟಿಒಆರ್ 221 ಟಿಡಿವಿ 2023**

(ಎಚ್.ಕೆ.ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ
ರಚನೆ ಹಾಗೂ ಪ್ರವಾಸೋದ್ಯಮ ಸಚಿವರು.